ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**Corporate Identity Number (CIN): U40109KA1999SGC025521**

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ಸಂಖ್ಯೆ: ಕವಿಪ್ರನಿನಿ/ಬಿ16/ಬಿ66/2476/19-20** **ದಿನಾಂಕ: 15 DEC 2021**

## ಸುತ್ತೋಲೆ

**ವಿಷಯ:** ಶೇಕಡ 10 ರ ಕೋಟಾದಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಯ ಬಡ್ತಿಗೆ ನಿಗಧಿಪಡಿಸಿದ ಎಕ್ಸಿಕ್ಯೂಟಿವ್ ಲೋಯರ್ ಪರೀಕ್ಷೆಗೆ ಹಾಜರಾಗುವ ಬಗ್ಗೆ.

**ಉಲ್ಲೇಖ:**
1. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5607/2000-01 ದಿನಾಂಕ: 22.04.2015.
2. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5607(2)/2020-21 ದಿನಾಂಕ: 07.05.2021.
3. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5607(5)/2000-01 ದಿನಾಂಕ: 30.08.2021.

***

ನಿಗಮದ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ಕ್ರಮ ಸಂಖ್ಯೆ: 12(ಬಿ)(1) ರಲ್ಲಿ ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇಕಡ 10 ರ ಕೋಟಾದಲ್ಲಿ ಎಲೆಕ್ಟ್ರಿಕಲ್/ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್‌ನಲ್ಲಿ ಡಿಪ್ಲೋಮ ವಿದ್ಯಾರ್ಹತೆ ಹೊಂದಿರುವ ಹಾಗೂ ಕೆಳಗಿನ ಯಾವುದೇ ಹುದ್ದೆಯಲ್ಲಿ ಕನಿಷ್ಟ 10 ವರ್ಷಗಳ ಸೇವೆ ಸಲ್ಲಿಸಿರುವ ನೌಕರರಿಗೆ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಬಡ್ತಿ ನೀಡಲು ನಿಗಮದ ದಿನಾಂಕ: 07.05.2021 ಹಾಗೂ 30.08.2021 ರ ಅಧಿಸೂಚನೆಯ ಮೂಲಕ ಸೂಕ್ತ ತಿದ್ದುಪಡಿ ಮಾಡಲಾಗಿರುತ್ತದೆ.

ದಿನಾಂಕ: 22.04.2015 ರ ಆದೇಶದಲ್ಲಿ, ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಾವಳಿಗಳಿಗೆ ಸೂಕ್ತ ತಿದ್ದುಪಡಿ ಮಾಡಿ ಎಲೆಕ್ಟ್ರಿಕಲ್ ಅಥವಾ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್‌ನಲ್ಲಿ ಡಿಪ್ಲೋಮಾ ಹೊಂದಿರುವ ನೌಕರರು/ಅಭ್ಯರ್ಥಿಗಳಿಗೆ ಮಾತ್ರ ಕಿರಿಯ ಇಂಜಿನಿಯರ್(ವಿ) ಹುದ್ದೆಯ ನೇಮಕಾತಿಗೆ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ದಿನಾಂಕ: 22.04.2015 ಕ್ಕಿಂತ ಮುಂಚಿತವಾಗಿ ಎಲೆಕ್ಟ್ರಾನಿಕ್ಸ್ (ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್), ಟೆಲಿಕಮ್ಯುನಿಕೇಷನ್ ಮತ್ತು ಮೆಕ್ಯಾನಿಕಲ್ ಇಂಜಿನಿಯರಿಂಗ್‌ನಲ್ಲಿ ಡಿಪ್ಲೋಮಾ ಪಡೆದಂತಹ ಅಥವಾ ನಿರಾಪೇಕ್ಷಣಾ ಪತ್ರವನ್ನು ಪಡೆದು ದಿನಾಂಕ: 22.04.2015 ರಂದು ಅಥವಾ ಅದಕ್ಕಿಂತ ಮೊದಲು ಕಾಲೇಜುಗಳಿಗೆ ಪ್ರವೇಶಾತಿ ಪಡೆದು ತದನಂತರದಲ್ಲಿ ಉತ್ತೀರ್ಣರಾದಂತಹ ಸೇವೆಯಲ್ಲಿರುವ ನೌಕರರಿಗೆ ಮಾತ್ರ ದಿನಾಂಕ: 30.08.2021 ರ ಅಧಿಸೂಚನೆಯಲ್ಲಿ ಕ್ರಮ ಸಂಖ್ಯೆ: 12(ಬಿ)(1) ರಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಬಡ್ತಿ ನೀಡಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಆದುದರಿಂದ, ದಿನಾಂಕ: 22.04.2015 ಕ್ಕಿಂತ ಮುಂಚಿತವಾಗಿ ಎಲೆಕ್ಟ್ರಾನಿಕ್ಸ್ (ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್), ಟೆಲಿಕಮ್ಯುನಿಕೇಷನ್ ಮತ್ತು ಮೆಕ್ಯಾನಿಕಲ್ ಇಂಜಿನಿಯರಿಂಗ್‌ನಲ್ಲಿ ಡಿಪ್ಲೋಮಾ ವಿದ್ಯಾರ್ಹತೆಯನ್ನು ಪಡೆದು, ದಿನಾಂಕ: 22.04.2015 ರ ನಂತರ ಸೇವೆಗೆ ಸೇರಿರುವ ನೌಕರರು ಕ್ರ.ಸಂ.12(ಬಿ)(1) ರ ಕೋಟಾದಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಯ ಬಡ್ತಿಗೆ ನಿಗಧಿಪಡಿಸಿದ ಎಕ್ಸಿಕ್ಯೂಟಿವ್ ಲೋಯರ್ ಪರೀಕ್ಷೆಗೆ ಹಾಜರಾಗಲು ಮತ್ತು ಕಿರಿಯ ಇಂಜಿನಿಯರ್(ವಿ) ಹುದ್ದೆಯ ಬಡ್ತಿಗೆ ಪರಿಗಣಿಸಲು ಅವಕಾಶವಿರುವುದಿಲ್ಲ ಎಂದು ತಿಳಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.